# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : M/s Karad Wind India Private Limited ಇವರಿಗೆ ಚಿತ್ರದುರ್ಗ ಜಿಲ್ಲೆಯ, ಚಿತ್ರದುರ್ಗ ಮತ್ತು ಹಿರಿಯೂರು ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 4.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :** 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KREDL/ 08/ KWIPL-4.5 MW/Chitradurga/F-106/2022/0215, ದಿನಾಂಕ: 19.01.2023.

2) ದಿನಾಂಕ:21.01.2023 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

3) ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

**ಪ್ರಸ್ತಾವನೆ :-**

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್.ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Karad Wind India Private Limited ಇವರಿಗೆ ಚಿತ್ರದುರ್ಗ ಜಿಲ್ಲೆಯ, ಚಿತ್ರದುರ್ಗ ಮತ್ತು ಹಿರಿಯೂರು ತಾಲ್ಲೂಕುಗಳ ಪಲ್ಲವನಹಳ್ಳಿ ಮತ್ತು ಚಿಕ್ಕಸಿದ್ದವ್ವನಹಳ್ಳಿ ಗ್ರಾಮಗಳಲ್ಲಿ 4.5 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕೆ.ಆರ್.ಇ.ಡಿ.ಎಲ್. ನಿಯಮಿತಕ್ಕೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸ್ವಂತ ಬಳಕೆಗೆ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್‌ಗೆ 4 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ ಅಳವಡಿಸುವಂತೆ ಷರತ್ತುಗಳನ್ನು ವಿಧಿಸಿ ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, M/s Karad Wind India Private Limited ಇವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಸದರಿಯವರು 4.5 ಮೆ.ವ್ಯಾ. ಸಾಮರ್ಥ್ಯಕ್ಕೆ 1.25 ಸಾಮರ್ಥ್ಯದ 2 ವಿಂಡ್ ಟರ್ಬೈನ್ ಹಾಗೂ 0.6 ಮೆ.ವ್ಯಾ. ಸಾಮರ್ಥ್ಯದ 2 ವಿಂಡ್ ಟರ್ಬೈನ್ ಮತ್ತು 0.8 ಮೆ.ವ್ಯಾ. ಸಾಮರ್ಥ್ಯದ 1 ವಿಂಡ್ ಟರ್ಬೈನ್ ಅಳವಡಿಸುತ್ತಿದ್ದು, ಪ್ರತಿ ಟರ್ಬೈನ್‌ಗೆ 04 ಎಕರೆಯಂತೆ ಲೆಕ್ಕೀಕರಿಸಿ ಒಟ್ಟು 20 ಎಕರೆ (5 Nos of WTG x 4 Acres = 20 Acres) ಜಮೀನನ್ನು ಮಾತ್ರ ಟೋಪೋಶೀಟ್ ಸಂಖ್ಯೆ:57 B/8 ರಲ್ಲಿ ಉಪಯೋಗಿಸಿಕೊಳ್ಳಬಹುದಾಗಿದೆ ಹಾಗೂ ಸದರಿಯವರು ಕೋರಿರುವ ಸ್ಥಳವು ಹಂಚಿಕೆಗೆ ಲಭ್ಯವಿರುತ್ತದೆ.

M/s Karad Wind India Private Limited ಕಂಪನಿಯು ಹೊಸ ಇಂಧನ ನೀತಿ 2022-27ರಂತೆ 4.5 ಮೆ.ವ್ಯಾ. ಸಾಮರ್ಥ್ಯದ ಯೋಜನೆಗೆ ಅರ್ಜಿ ಹಾಗೂ 30% ಸಂಸ್ಕರಣಾ ಶುಲ್ಕವನ್ನು ಪಾವತಿಸಿರುತ್ತಾರೆ. ಬಾಕಿ ಉಳಿದ 70% ಸಂಸ್ಕರಣಾ ಶುಲ್ಕವನ್ನು ಹಂಚಿಕೆ ಆದೇಶ ಹೊರಡಿಸಿದ ನಂತರ ಕೆ.ಆರ್.ಇ.ಡಿ.ಎಲ್. ನಿಯಮಿತದೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪೂರ್ವದಲ್ಲಿ ಸಂದಾಯ ಮಾಡಬೇಕಾಗಿರುತ್ತದೆ.

M/s Karad Wind India Private Limited ಕಂಪನಿಯು ದಿನಾಂಕ:24.08.2022 ರಂದು ಬೆಂಗಳೂರಿನಲ್ಲಿ ಸ್ಥಾಪಿತಗೊಂಡಿದ್ದು, ಸದರಿ ಕಂಪನಿಯು M/s SML Electricals India Private Limited ಕಂಪನಿಯ SPV ಸಂಸ್ಥೆಯಾಗಿರುತ್ತದೆ. M/s SML Electricals India Private Limited ಇವರ ನೆಟ್‌ವರ್ತ್ ದಿನಾಂಕ:31.03.2022ರ ಅಂತ್ಯಕ್ಕೆ ರೂ.284.48 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ದೃಢೀಕರಣ ಪತ್ರವನ್ನು ನೀಡಿರುತ್ತಾರೆ.

MD KREDL

GM (Tech) KREDL

Wind Section Inward No. 1639 Date 15-2-23 Sig.